## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ದಾವಣಗೆರೆ ಜಿಲ್ಲೆ, ಚನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರು ಮತ್ತು ಇತರೆ 05 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:15.03.2022ರಂದು ನಡೆದ ರಾಜ್ಯ ತಾಂತ್ರಿಕ ಸಲಹಾ ಸಮಿತಿ ಸಭೆಯ (STA) ನಡವಳಿಗಳು.
2. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ. ಇಲಾಖೆ, ಇವರ ಕಡತ ಸಂ:ಗ್ರಾಕುನೀ&ನೈಇ/150/ಮುಇಂ/ತಾಂತ್ರಿಕ/2021-22.

---

**ಪೀಠಿಕೆ:**

ದಾವಣಗೆರೆ ಜಿಲ್ಲೆ, ಚನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರು ಮತ್ತು ಇತರೆ 05 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜಿಗೆ ಮೇಲೆ ಓದಲಾದ(1)ರ ರಾಜ್ಯ ತಾಂತ್ರಿಕ ಸಲಹಾ ಸಮಿತಿ ಸಭೆ(STA)ಯಲ್ಲಿ ಅನುಮೋದನೆ ಪಡೆಯಲಾಗಿದೆ. ಮೇಲೆ ಓದಲಾದ(2)ರ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಬೆಂಗಳೂರುರವರ ಕಡತದಲ್ಲಿ **ರೂ.998.00ಲಕ್ಷ**ಗಳ ಅಂದಾಜು ಮೊತ್ತಕ್ಕೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಸದರಿ ಯೋಜನೆಯ ಕಾಮಗಾರಿಯಲ್ಲಿ ಎಲ್ಲಾ ಗ್ರಾಮಗಳಿಗೆ 55 LPCD ನೀರನ್ನು ಒದಗಿಸುವುದು, Pumping Machinery & Raising Main ಬದಲಾವಣೆ ಮತ್ತು 2 ಗ್ರಾಮಗಳಲ್ಲಿ ಹೊಸದಾಗಿ OHT ಗಳನ್ನು ನಿರ್ಮಿಸಲು ಅಂದಾಜು ಪಟ್ಟಿಯಲ್ಲಿ ಅನುವು ಮಾಡಿಕೊಳ್ಳಲಾಗಿದೆ. ದಿನಾಂಕ:18.08.2021ರ SLSSC ಸಭೆಯಲ್ಲಿ 2021-22ನೇ ಸಾಲಿನ JJM ಕಾರ್ಯಕ್ರಮದ ಅಡಿಯಲ್ಲಿ ಕ್ರಿಯಾ ಯೋಜನೆಗೆ ಅನುಮೋದನೆ ದೊರಕಿರುತ್ತದೆ (JJM ಕ್ರಿಯಾ ಯೋಜನೆಯಲ್ಲಿ ಸದರಿ ಕಾಮಗಾರಿಯನ್ನು ಪರಿಗಣಿಸಲಾಗಿರುತ್ತದೆ).

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ದಾವಣಗೆರೆ** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ:-

**ಸರ್ಕಾರದ ಆದೇಶ ಸಂಖ್ಯೆ: ಗ್ರಾಕುನೀ&ನೈಇ/494/ಗ್ರಾನೀಸ(4)2022 ಬೆಂಗಳೂರು, ದಿನಾಂಕ:07.10.2022** 1645

ಪೀಠಿಕೆಯಲ್ಲಿನ ವಾಸ್ತವಾಂಶಗಳನ್ನು ಪರಿಶೀಲಿಸಿ, ದಾವಣಗೆರೆ ಜಿಲ್ಲೆ, ಚನ್ನಗಿರಿ ತಾಲ್ಲೂಕಿನ ಸಂತೆಬೆನ್ನೂರು ಮತ್ತು ಇತರೆ 05 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಪುನಃಶ್ಚೇತನ (Augmentation) ಕಾಮಗಾರಿಯ ಅಂದಾಜು ಮೊತ್ತ **ರೂ.998.00ಲಕ್ಷ(ಒಂಭೈನೂರ ತೊಂಭತ್ತೆಂಟು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ** ಜಲ ಜೀವನ ಮಿಷನ್ **(JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತಾಪಿತ ಕಾಮಗಾರಿಗೆ ಅನುಮೋದನೆ ನೀಡಲಾದ ಅಂದಾಜಿನ ವ್ಯಾಪ್ತಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸತಕ್ಕದ್ದು. ಅಂದಾಜು ಮೊತ್ತದಲ್ಲಿ ಯಾವುದೇ ರೀತಿಯ ಹೆಚ್ಚಳಕ್ಕೆ ಆಸ್ಪದ ನೀಡಬಾರದು.

3. ಈ ಆದೇಶದಡಿ ಅನುಮೋದನೆಗೊಂಡ ಕುಡಿಯುವ ನೀರಿನ ಯೋಜನೆಯ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, **ಬೆಂಗಳೂರು** ಇವರು ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆ ಮಾಡಲಾಗುವುದು.

4. ಯೋಜನೆಯನ್ನು ಚಾಲ್ತಿ ಪಾರದರ್ಶಕ (KTPP ಕಾಯ್ದೆಯನ್ವಯ) ನೀತಿಯನ್ವಯ ಅನುಷ್ಠಾನಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

12/10/22

ನಿರ್ದೇಶಕರು
ಹಾಗೂ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ದಾವಣಗೆರೆ.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
8. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ದಾವಣಗೆರೆ.**
9. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ದಾವಣಗೆರೆ.**
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಸಂಪಾದಕರು, "ಕರ್ನಾಟಕ ವಿಕಾಸ", ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
12. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
13. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ದಾವಣಗೆರೆ.**
14. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು), ಬಹುಮಹಡಿ ಕಟ್ಟಡ, ಬೆಂಗಳೂರು.
15. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
16. ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು), ಬಹುಮಹಡಿ ಕಟ್ಟಡ ಬೆಂಗಳೂರು.
17. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.